**ದಿನಾಂಕ 23.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಅಧಿಕಾರ ಪತ್ರವನ್ನು **ನಿಪಿ 16** ಎಂದು, ಎಂ.ಎಲ್.ಸಿ ರಿಜಿಸ್ಟರ್ ಎಕ್ಸ್ ಟ್ರ್ಯಾಕ್ಟ್ ಮತ್ತು ಪೊಲೀಸ್ ಇಂಟಿಮೇಷನ್ ನ ಧೃಡಿಕೃತ ಪ್ರತಿ( ಮೂಲ ವಹಿಯೊಂದಿಗೆ ಹೋಲಿಕೆ ಮಾಡಿ ಮೂಲ ವಹಿಯನ್ನು ಸಾಕ್ಷಿಗೆ ಹಿಂದಿರುಗಿಸಲಾಯಿತು) ಗಳನ್ನು ಕ್ರಮವಾಗಿ **ನಿಪಿ 17 ಮತ್ತು 18** ಎಂದು, ಕೇಸ್ ಶೀಟನ್ನು **ನಿಪಿ 19** ಎಂದು ಗುರುತಿಸಲಾಯಿತು.

2ನೇ ಎದುರುದಾರರ ಪರ ಮಾನ್ಯ ವಕೀಲರು ಪ್ರತಿವಾದ ಪತ್ರ ಸಲ್ಲಿಸದಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ನಾನು ಲೈಫ್ ಕೇರ್ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿಲ್ಲ ಎಂದರೆ ಸರಿಯಲ್ಲ. ನಾನುಹಾಜರುಪಡಿಸಿರುವ ದಾಖಲಾತಿಗಳ ಬಗ್ಗೆ ನನಗೆ ವಯಕ್ತಿಕ ಮಾಹಿತಿ ಇಲ್ಲ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**